ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕಃ 11.02.2025.

**ಮುಖ್ಯ ವಿಚಾರಣೆಃ** ಎದುರುದಾರ ಪರ ಶ್ರೀ ಆರ್.ಜೆ.ಪಿ. ವಕೀಲರಿಂದಃ

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದಾ ಕೂಡಿದ್ದು, ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ಇಂದು ನಾನು ಅರ್ಜಿಗೆ ಸಂಬಂಧಪಟ್ಟಂತೆ ಕೆಲವು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ, ಅವುಗಳನ್ನು ನನ್ನ ಪರವಾಗಿ ಪರಿಗಣಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ನಾನು ಹಾಜರುಪಡಿಸಿದ ಓ.ಎಸ್.ನಂ.69/2018ರ ಸಂಪೂರ್ಣ ಆದೇಶದ ಪ್ರತಿಯನ್ನು ನಿಆರ್-1 ಎಂದು, ಪಿಎಸ್ ವರದಿಯನ್ನು ನಿಆರ್-2 ಎಂದು, ಸಮನ್ಸ್ ಪ್ರತಿಯನ್ನು ನಿಆರ್-3 ಎಂದು, ಬೇಲಿಫ್ ವರದಿಯನ್ನು ನಿಆರ್-4 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿದಾರರು ಸಲ್ಲಿಸಿದ ಅರ್ಜಿಯನ್ನು ಖರ್ಚು ಸಮೇತ ವಜಾ ಮಾಡಬೇಕೆಂದು ಮಾನ್ಯ ನ್ಯಾಯಾಲಯಕ್ಕೆ ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ಅರ್ಜಿದಾರ ಪರ ವಕೀಲರಿಂದಃ

(ಈ ಹಂತದಲ್ಲಿ ಅರ್ಜಿದಾರ ಪರ ವಕೀಲರು ಪಾಟೀ ಸವಾಲು ಮಾಡಲು ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**